## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರು ನಿಯಮ 330ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ

### ವಿಷಯ:

ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸನ್ನು ಸಚಿವ ಸಂಪುಟದಲ್ಲಿ ಒಪ್ಪಿಕೊಂಡು ಇತರ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವಂತೆ ಶೇಕಡಾ 100ರಷ್ಟು ವೇತನಾನುದಾನ, ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು (ಅನುದಾನ ಸಂಹಿತೆ) ನೀಡಲು ಡಿಸೆಂಬರ್ 2014ರಲ್ಲಿ ಜಾರಿಗೊಳಿಸಲು ಆದೇಶಿಸಲಾಗಿದೆ. ಸೇವಾ ನಿಯಮಗಳನ್ನು ರೂಪಿಸಲು ಕ್ರಮ ಕೈಗೊಳ್ಳುತ್ತಿರುವುದಾಗಿ ಸದನಕ್ಕೆ ಉತ್ತರ ನೀಡಿದ್ದರು ಸಹ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳು ಕಳೆದ 10 ವರ್ಷಗಳಿಂದ ಇದುವರೆವಿಗೂ ಸೇವಾ ನಿಯಮಗಳನ್ನು ರೂಪಿಸಿ ಜಾರಿಗೊಳಿಸಿರುವುದಿಲ್ಲ. 2006ರ ನಂತರ ಸೇವೆಗೆ ಸೇರಿ ನಿವೃತ್ತಿಯಾದ ನೌಕರರಿಗೆ ಗಳಿಕೆ ರಜೆ ನಗದೀಕರಣ ಸೌಲಭ್ಯಗಳನ್ನು ನೀಡಿರುವುದಿಲ್ಲ. ಕಾರ್ಯಭಾರದ ಕೊರತೆಯಾದಾಗ ಒಂದು ಅನುದಾನಿತ ಸಂಸ್ಥೆಯಿಂದ ಮತ್ತೊಂದು ಸಂಸ್ಥೆಗೆ ಸ್ಥಳನಿಯುಕ್ತಿಗೊಳಿಸುವುದು, ಅನುದಾನಿತ ಸಂಸ್ಥೆಯಿಂದ ಸರ್ಕಾರಿ ಕಾಲೇಜುಗಳಿಗೆ ನಿಯೋಜನೆ ಸೇರಿದಂತೆ ಇತರೆ ಅನುದಾನಿತ ನೌಕರರುಗಳಿಗೆ ನೀಡಿರುವ ಎಲ್ಲಾ ಸೇವಾ ಸೌಲಭ್ಯಗಳನ್ನು ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಸೇರಿದಂತೆ ಮಂಜೂರು ಮಾಡಿ ಆದೇಶ ಹೊರಡಿಸಬೇಕೆಂಬ ವಿಷಯವನ್ನು ನಿಯಮ 330ರಲ್ಲಿ ಮಾನ್ಯ ಕೌಶಲ್ಯಾಭಿವೃದ್ಧಿ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

### ಹೇಳಿಕೆ

ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ನೌಕರರಿಗೆ ಶ್ರೀ ಪಿ.ಎಸ್.ಎಸ್.ಥಾಮಸ್ ವರದಿಯಲ್ಲಿನ ಶಿಫಾರಸ್ಸುಗಳನ್ನು ಜಾರಿಗೊಳಿಸಲು 1997 ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಿ Karnataka Technical Education Institutions (Grant-in-Aid Private Industrial Training Institutes) Rules 2023ರ ಕರಡನ್ನು ಕರ್ನಾಟಕ ರಾಜ್ಯಪತ್ರ ವಿಶೇಷ ರಾಜ್ಯಪತ್ರಿಕೆಯಲ್ಲಿ ದಿನಾಂಕ: 30.01.2023 ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ. ಸದರಿ ಕರಡು ನಿಯಮಾವಳಿಗಳಿಗೆ ಆಕ್ಷೇಪಣೆ ಸಲ್ಲಿಸಲು ನೀಡಲಾಗಿದ್ದ 15 ದಿನಗಳ ಕಾಲಾವಧಿಯಲ್ಲಿ ಒಟ್ಟು 512 ಆಕ್ಷೇಪಣೆಗಳು ಸ್ವೀಕೃತವಾಗಿದ್ದು ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿ ವರದಿ ನೀಡಲು ಸರ್ಕಾರದ ದಿನಾಂಕ:10.03.2025ರ ಆದೇಶದಲ್ಲಿ ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿರುತ್ತದೆ. ಸಮಿತಿಯು ವರದಿಯನ್ನು ಸಲ್ಲಿಸಿದ್ದು, ನಿಯಮಗಳನ್ನು ಶೀಘ್ರದಲ್ಲಿ ಅಂತಿಮಗೊಳಿಸಲಾಗುವುದು.

**ಕೌಉಜೀಇ 64 ಕೈತಪ್ರ 2025**

(ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.